## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 865 (824) |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 15.12.2025 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ಕರ್ನಾಟಕ ಪಬ್ಲಿಕ್ ಶಾಲೆ (ಕೆ.ಪಿ.ಎಸ್) ಶಾಲೆಗಳ ಸಂಖ್ಯೆ ಎಷ್ಟು; ಪ್ರಸ್ತುತ ಎಷ್ಟು ಹೊಸ ಕೆ.ಪಿ.ಎಸ್ ಶಾಲೆಗಳನ್ನು ತೆರೆಯಲು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. | ರಾಜ್ಯದಲ್ಲಿ ಪ್ರಸ್ತುತ ಒಟ್ಟು 309 ಕರ್ನಾಟಕ ಪಬ್ಲಿಕ್ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ.<br>2025-26ನೇ ಸಾಲಿನಲ್ಲಿ ಏಷಿಯನ್ ಡೆವಲೆಪ್‌ಮೆಂಟ್ ಬ್ಯಾಂಕ್ ಇವರ ಸಹಕಾರದೊಂದಿಗೆ 500 ಶಾಲೆಗಳು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಲಿ ಅನುದಾನದಲ್ಲಿ 200 ಶಾಲೆಗಳು, CEPMIZ ಯೋಜನೆಯಡಿ 100 ಶಾಲೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅನುದಾನದಡಿ 100 ಶಾಲೆಗಳು ಸೇರಿದಂತೆ ಒಟ್ಟಾರೆ 900 ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಉನ್ನತೀಕರಿಸಲಾಗುತ್ತಿದೆ. |
| ಆ | ಸರ್ಕಾರಿ ಶಾಲೆಗಳನ್ನು ಕೇವಲ ಕೆ.ಪಿ.ಎಸ್ ಶಾಲೆಗಳೆಂದು ನಾಮಾಂಕಿತ ಬದಲಾವಣೆಯಂತೆ ಮೇಲ್ದರ್ಜೆಗೇರಿಸಿ ಹೊಸ ಪರಿಣಿತ ಶಿಕ್ಷಕರನ್ನು ನೇಮಕ ಮಾಡದೆ ಅಲ್ಲಿ ಹಳೆಯ ಶಿಕ್ಷಕರ ಸಿಬ್ಬಂದಿಗಳನ್ನೇ ಮುಂದುವರೆಸಿರುವುದರಿಂದ ಮಕ್ಕಳ ಕಲಿಕೆಯಲ್ಲಿ ಯಾವುದೇ ಬದಲಾವಣೆಗಳು ಆಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ. ಬಂದಿದ್ದಲ್ಲಿ ಕೈಗೊಂಡ ಕ್ರಮಗಳೇನು? | ಪೂರ್ವ ಪ್ರಾಥಮಿಕ ತರಗತಿಯಿಂದ ಪದವಿ ಪೂರ್ವ ಶಿಕ್ಷಣ ದವರೆಗೆ ಒಂದೇ ಆವರಣದಲ್ಲಿ (Campus) ವಿದ್ಯಾಭ್ಯಾಸ ನಡೆಸಲು ಅನುಕೂಲವಾಗುವಂತೆ ಹಾಲಿ ಇರುವ ನಿಗದಿಪಡಿಸಿದ ಮಾನದಂಡಗಳನ್ನು ಪೂರೈಸಿರುವ ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಉನ್ನತೀಕರಿಸಲಾಗುತ್ತಿದೆ.<br>NCTE ಮತ್ತು ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಈಗಾಗಲೇ ಎಲ್ಲಾ ಸರ್ಕಾರಿ ಶಾಲೆಗಳಿಗೆ ಒದಗಿಸಲಾಗಿರುವುದರಿಂದ, ಅರ್ಹ ವಿದ್ಯಾರ್ಹತೆ ಹೊಂದಿ ಶಿಕ್ಷಕರೇ ಕೆ.ಪಿ.ಎಸ್. ಶಾಲೆಗಳಲ್ಲಿಯೂ ಮುಂದುವರೆದಿದ್ದು, ಇದರಿಂದ ಮಕ್ಕಳ ಕಲಿಕೆಗೆ ಯಾವುದೇ ತೊಂದರೆಯಾಗುತ್ತಿಲ್ಲ.<br>ದ್ವಿಭಾಷಾ ತರಗತಿಗಳಿಗೆ (ಪೂರ್ವ ಪ್ರಾಥಮಿಕದಿಂದ 5ನೇ ತರಗತಿಯವರೆಗೆ) ಮತ್ತು ಆಂಗ್ಲ ಮಾಧ್ಯಮ ತರಗತಿಗಳಿಗೆ |

| | | |
|---|---|---|
| | | ಬೋಧಿಸುವ ಶಿಕ್ಷಕರಿಗೆ ರೀಜನಲ್ ಇನ್ಸ್ಟಿಟ್ಯೂಟ್ ಆಫ್ ಇಂಗ್ಲೀಷ್ ಮೂಲಕ ಆಂಗ್ಲ ಮಾಧ್ಯಮ ಬೋಧನೆಗೆ ಅಗತ್ಯ ತರಬೇತಿಗಳನ್ನು ನೀಡಲಾಗುತ್ತಿದೆ.<br>"ಉತ್ತಮ ಕಲಿಕೆ, ಉಜ್ವಲ ಭವಿಷ್ಯ" ಎಂಬುದು ಕೆ.ಪಿ.ಎಸ್. ಶಾಲೆಗಳ ಧ್ಯೇಯ ವಾಕ್ಯವಾಗಿದ್ದು, ಪ್ರತಿ ಮಗುವೂ ಶಾಲೆಯಲ್ಲಿರಬೇಕು ಮತ್ತು ಚೆನ್ನಾಗಿ ಕಲಿಯಬೇಕು ಎಂಬ ಮಹತ್ತರ ಉದ್ದೇಶದಿಂದ ರಾಜ್ಯದ ಎಲ್ಲಾ ಕರ್ನಾಟಕ ಪಬ್ಲಿಕ್ ಶಾಲೆಗಳು ಏಕರೂಪದ ನೀತಿಯನ್ನು ಪಾಲಿಸುವಂತೆ '**ಕರ್ನಾಟಕ ಪಬ್ಲಿಕ್ ಶಾಲಾ ಮಾನಕಗಳು**' ಕೈಪಿಡಿಯನ್ನು ಸಿದ್ಧಪಡಿಸಲಾಗಿದ್ದು, ಅದರಲ್ಲಿ ನಿಗದಿಪಡಿಸಿರುವ ಗುಣಮಟ್ಟದ ಮಾನದಂಡಗಳಂತೆ ಪ್ರತಿ ಶಾಲೆಯಲ್ಲಿ ಕನಿಷ್ಠ 1200 ವಿದ್ಯಾರ್ಥಿಗಳಿಗೆ ಅವಶ್ಯಕವಿರುವ ಸಮರ್ಪಕ ಶೈಕ್ಷಣಿಕ ಮತ್ತು ಭೌತಿಕ ಸೌಕರ್ಯಗಳನ್ನು ಒದಗಿಸಿ ಉನ್ನತೀಕರಿಸಲಾಗುವುದು.<br>LKG ಯಿಂದ 5ನೇ ತರಗತಿಯವರೆಗೆ ಏಕ ತರಗತಿ ಪಠ್ಯಪುಸ್ತಕ ಆಧಾರಿತ ದ್ವಿಭಾಷಾ ಮಾಧ್ಯಮದ ಬೋಧನೆಯನ್ನು ಅಳವಡಿಸಿಕೊಳ್ಳುವುದು, 6 ರಿಂದ 10ನೇ ತರಗತಿಯವರೆಗೆ ಪ್ರಸ್ತುತ ಇರುವ ಮಾಧ್ಯಮದೊಂದಿಗೆ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಿ ಮಾಧ್ಯಮವಾರು ಏಕತರಗತಿ ಪಠ್ಯಪುಸ್ತಕ ಆಧಾರಿತ ತರಗತಿಗಳು, ಮತ್ತು ಕ್ರಿಯಾಶೀಲ ಬೋಧನಾ ಪದ್ಧತಿಯನ್ನು ಅಳವಡಿಸಿಕೊಳ್ಳುವುದು, Iನೇ ತರಗತಿಯಿಂದ ಕಂಪ್ಯೂಟರ್ ಶಿಕ್ಷಣದ ಪರಿಚಯ, VIನೇ ತರಗತಿಯಿಂದ ಉದ್ಯಮ ಸಮ್ಮಿಳಿತ ವೃತ್ತಿಪರ ಕೌಶಲ ಆಧಾರಿತ ಪಠ್ಯಕ್ರಮದ ಪರಿಚಯ ಮತ್ತು VIIIನೇ ತರಗತಿಯಿಂದ ಮಂಡಳಿ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಾಮರ್ಥ್ಯ ಅಭಿವೃದ್ಧಿ ತರಗತಿಗಳನ್ನು ಪ್ರಾರಂಭಿಸಲಾಗುವುದು. ಕೆ.ಪಿ.ಎಸ್. ಶಾಲೆಗಳಲ್ಲಿ LKG ಯಿಂದ 5ನೇ ತರಗತಿಯವರೆಗೆ ಏಕ ತರಗತಿ ಪಠ್ಯಪುಸ್ತಕ ಆಧಾರಿತ ದ್ವಿಭಾಷಾ ಮಾಧ್ಯಮದ ಬೋಧನೆಯನ್ನು ಮತ್ತು 6 ರಿಂದ 10ನೇ ತರಗತಿಯವರೆಗೆ ಮಾಧ್ಯಮವಾರು ಏಕತರಗತಿ ಪಠ್ಯಪುಸ್ತಕ ಆಧಾರಿತ ತರಗತಿಗಳು, ಕ್ರಿಯಾಶೀಲ ಉತ್ತಮ ಗುಣಮಟ್ಟದ ಕಲಿಕಾ ಪದ್ಧತಿಗಳನ್ನು ಅಳವಡಿಸಲಾಗುವುದು. ಭವಿಷ್ಯದ |

| | | |
|---|---|---|
| | | ವೃತ್ತಿಪರ ತರಬೇತಿಗಳನ್ನು 6 ನೇ ತರಗತಿಯಿಂದ ಆರಂಭಿಸಲು, ಪಠ್ಯಕ್ರಮವನ್ನು ಉದ್ಯಮ ಪಾಲುದಾರರ ಸಹಾಯದಿಂದ ವಿನ್ಯಾಸಗೊಳಿಸಿ ಜಂಟಿ ಪ್ರಮಾಣ ಪತ್ರ ನೀಡಲು ಕ್ರಮವಹಿಸಲಾಗುತ್ತಿದೆ. ಈ ಶಾಲೆಗಳು ಸಮರ್ಥ ಶಾಲಾ ಮುಖ್ಯಸ್ಥರು ಮತ್ತು ಅರ್ಹ ಶಿಕ್ಷಕರ ಸಂಪೂರ್ಣ ಸಂಪನ್ಮೂಲವನ್ನು ಹೊಂದಲು ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಪ್ರಕ್ರಿಯೆಯಲ್ಲಿ ಸೂಕ್ತ ತಿದ್ದುಪಡಿಗಳನ್ನು ತರಲಾಗುವುದು ಮತ್ತು ಶಿಕ್ಷಕರ ಪ್ರೋತ್ಸಾಹಕ ಕಾರ್ಯಕ್ರಮಗಳನ್ನು ಜಾರಿಗೊಳಿಸಿ ಈ ಶಾಲೆಗಳನ್ನು ಪ್ರೋತ್ಸಾಹಿಸಲಾಗುವುದು. ಶಿಕ್ಷಕರ ಅಗತ್ಯಕ್ಕೆ ಅನುಗುಣವಾದ ತರಬೇತಿ, ಸಾಮರ್ಥ್ಯ ಅಭಿವೃದ್ಧಿ ಉಪಕ್ರಮಗಳ ಮೂಲಕ ತರಗತಿ ಕಲಿಕೆಯ ಅಭ್ಯಾಸಗಳನ್ನು ಬಲಪಡಿಸಲಾಗುವುದು. ಇದು ಪರಿಣಾಮಕಾರಿ ಶಿಕ್ಷಣ ಶಾಸ್ತ್ರ, ಮತ್ತು ವಿದ್ಯಾರ್ಥಿಗಳ ತೊಡಗಿಸಿಕೊಳ್ಳುವಿಕೆಯನ್ನು ಸುಧಾರಿಸುತ್ತದೆ.<br>ಪ್ರೌಢಶಾಲಾ ವಿದ್ಯಾರ್ಥಿಗಳ ಕಲಿಕೆಯನ್ನು ಸುಧಾರಿಸುವುದು ಹಾಗು 10ನೇ - 12ನೇ ತರಗತಿಯ ಮಂಡಳಿ ಪರೀಕ್ಷೆಗಳಲ್ಲಿ ಫಲಿತಾಂಶವನ್ನು ಹೆಚ್ಚಿಸುವ ಕಡೆ ಗಮನ ಹರಿಸಲಾಗಿದೆ. ಪ್ರೌಢ ತರಗತಿಗಳ ಫಲಿತಾಂಶಗಳಿಗೆ ವಿಶೇಷ ಒತ್ತು ನೀಡಲಾಗುವುದು. ಇದರಲ್ಲಿ STEAM ಶಿಕ್ಷಣ, ವೃತ್ತಿಪರ ತರಬೇತಿ, ವೃತ್ತಿ ಸಲಹೆ, ಸ್ಪರ್ಧಾತ್ಮಕ ಪರೀಕ್ಷೆ ತಯಾರಿ ಮತ್ತು 21ನೇ ಶತಮಾನದ ಕೌಶಲಗಳಾದ ಸೃಜನಶೀಲತೆ, ವಿಮರ್ಶಾತ್ಮಕ ಚಿಂತನೆ, ಸಹಯೋಗ, ಸಂವಹನ ಮತ್ತು ಜೀವನ ಕೌಶಲಗಳ ಅಭಿವೃದ್ಧಿಯನ್ನು ಸಮ್ಮಿಳಿತಗೊಳಿಸಲಾಗುವುದು. AI ಮತ್ತು ಡಿಜಿಟಲ್ ಸಂಪನ್ಮೂಲಗಳನ್ನು ಸಂಯೋಜಿಸುವ ಮೂಲಕ ಹಾಗೂ ಮೂಲಸೌಕರ್ಯವನ್ನು ಸುಧಾರಿಸುವ ಮತ್ತು ವ್ಯಾಪ್ತಿಯನ್ನು ವಿಸ್ತರಿಸುವ ಮೂಲಕ ಶಾಲೆಗಳು ಸಾರ್ವಜನಿಕ ಶಿಕ್ಷಣದ ಪ್ರಗತಿಪರ ಮರುಕಲ್ಪನೆಯನ್ನು ನೀಡುತ್ತದೆ. ಈ ಶಾಲೆಗಳು ಉಚಿತ ಸಾರಿಗೆ ಸೌಲಭ್ಯ ಮತ್ತು ತಾಂತ್ರಿಕ ಸಮ್ಮಿಳಿತದ ಕಲಿಸುವಿಕೆಯೊಂದಿಗೆ ಮಕ್ಕಳ ಶಿಕ್ಷಣ ಗುಣಮಟ್ಟವನ್ನು ಉತ್ತಮಪಡಿಸಲಾಗುವುದು. |

| | | |
|---|---|---|
| ಇ | ವಿಶೇಷವಾಗಿ ಕೆ.ಪಿ.ಎಸ್ ಶಾಲೆಗಳಿಗೆಂದೆ ಆಂಗ್ಲ ಪರಿಣಿತಿ ಹೊಂದಿರುವ **ಹೊಸ** ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ. | NCTE ಮತ್ತು ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಈಗಾಗಲೇ ಎಲ್ಲಾ ಸರ್ಕಾರಿ ಶಾಲೆಗಳಿಗೆ ಒದಗಿಸಲಾಗಿರುವುದರಿಂದ, ಅರ್ಹ ವಿದ್ಯಾರ್ಹತೆ ಹೊಂದಿ ಶಿಕ್ಷಕರೇ ಕೆ.ಪಿ.ಎಸ್. ಶಾಲೆಗಳಲ್ಲಿಯೂ ಮುಂದುವರೆದಿರುತ್ತಾರೆ. ದ್ವಿಭಾಷಾ ತರಗತಿಗಳಿಗೆ (ಪೂರ್ವ ಪ್ರಾಥಮಿಕದಿಂದ 5ನೇ ತರಗತಿಯವರೆಗೆ) ಮತ್ತು ಆಂಗ್ಲ ಮಾಧ್ಯಮ ತರಗತಿಗಳಿಗೆ ಬೋಧಿಸುವ ಶಿಕ್ಷಕರಿಗೆ ರೀಜನಲ್ ಇನ್ಸ್ಟಿಟ್ಯೂಟ್ ಆಫ್ ಇಂಗ್ಲೀಷ್ ಮೂಲಕ ಆಂಗ್ಲ ಮಾದ್ಯಮ ಬೋಧನೆಗೆ ಅಗತ್ಯ ತರಬೇತಿಗಳನ್ನು ನೀಡಲಾಗುತ್ತಿದೆ. |
| ಈ | ಪ್ರಸ್ತುತ ಎಷ್ಟು ಶಾಲೆಗಳನ್ನು ಕೆ.ಪಿ.ಎಸ್ ಶಾಲೆಗಳೆಂದು ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗಿದೆ: ಮೇಲ್ದರ್ಜೆಗೇರಿಸುವ ನಿಯಮಗಳು ಹಾಗೂ ಕ್ರಮಗಳ ಬಗ್ಗೆ ವಿವರ ನೀಡುವುದು. | 2018-2025 ನೇ ಸಾಲಿನವರೆಗೆ 309 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ.<br>2025-26ನೇ ಸಾಲಿನಲ್ಲಿ ಏಷಿಯನ್ ಡೆವಲೆಪ್‌ಮೆಂಟ್ ಬ್ಯಾಂಕ್ ಇವರ ಸಹಕಾರದೊಂದಿಗೆ 500 ಶಾಲೆಗಳು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಲಿ ಅನುದಾನದಲ್ಲಿ 200 ಶಾಲೆಗಳು, CEPMIZ ಯೋಜನೆಯಡಿ 100 ಶಾಲೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅನುದಾನದಡಿ 100 ಶಾಲೆಗಳು ಸೇರಿದಂತೆ ಒಟ್ಟಾರೆ 900 ಸರ್ಕಾರಿ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳನ್ನಾಗಿ ಉನ್ನತೀಕರಿಸಲಾಗುತ್ತಿದೆ.<br>ನಗರ ಪ್ರದೇಶದಲ್ಲಿ ಕನಿಷ್ಟ ಅರ್ಧ ಎಕರೆ, ಗ್ರಾಮಾಂತರ ಪ್ರದೇಶದಲ್ಲಿ ಕನಿಷ್ಟ 1 ಎಕರೆ ನಿವೇಶನ ಹೊಂದಿದ್ದು, ಶಾಲೆಯ ಕನಿಷ್ಟ ದಾಖಲಾತಿಯು 300 ಕ್ಕಿಂತ ಹೆಚ್ಚು ಇರುವ ಶಾಲೆಗಳನ್ನು ಗುರುತಿಸಿ ದಾಖಲಾತಿ ಹೆಚ್ಚಾಗಿರುವ ಶಾಲೆಗಳನ್ನು ಆದ್ಯತೆಯನುಸಾರ ಕರ್ನಾಟಕ ಪಬ್ಲಿಕ್ ಶಾಲೆಯನ್ನಾಗಿ ಉನ್ನತೀಕರಿಸಲು ಕ್ರಮವಹಿಸಲಾಗುತ್ತಿದೆ. |

**ಇಪಿ 404 ಯೋಸಕ 2025**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**